ಓ.ಎಸ್. ನಂಃ 44/2022

**ಡಿ.ಡಬ್ಲ್ಯೂಃ 2**

**ದಿನಾಂಕ 09.01.2026 ರಂದು ಸಾಕ್ಷಿದಾರರನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ ವಾದಿಯ ಪರ ಃಶ್ರೀ ಬಿ.ಎಸ್.ಎಂ. ವಕೀಲರಿಂದಃ**

1. 1 ರಿಂದ 3 ನೇ ಪ್ರತಿವಾದಿಯರು ನಿಮ್ಮ ಸೋದರ ಮಾವನ ಮಕ್ಕಳು ಎಂದು ಸೂಚಿಸಿದ ಪ್ರಶ್ನೆಗೆ ಸಾಕ್ಷಿಯು 1 ರಿಂದ 3 ನೇ ಪ್ರತಿವಾದಿಯರು ನನ್ನ ಸಂಬಂಧಿಕರು ಮತ್ತು ಗ್ರಾಮಸ್ಥರು ಎಂದು ನುಡಿದಿರುತ್ತಾರೆ. 1 ರಿಂದ 3 ನೇ ಪ್ರತಿವಾದಿಯರು ವಾದಿಯರಿಂದ ಸಾಲವನ್ನು ಪಡೆಯುವಾಗ ತಮ್ಮ ಮನೆಯನ್ನು ವಾದಿಯರಿಗೆ ಸಾಲದ ಭದ್ರತೆಗಾಗಿ ನೀಡಿದ್ದು, ಅದರ ಸಂಬಂಧ ನಾನು ವಾದಿ ಮತ್ತು ಪ್ರತಿವಾದಿಯರ ಮಧ್ಯ ನ್ಯಾಯ ಪಂಚಾಯಿತಿಕೆ ಮಾಡಿರುತ್ತೇನೆ.

2. ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಪ್ರತಿವಾದಿಯರ ಮನೆಯ ಜಂಜರ್ ಸಂಖ್ಯೆ ನನಗೆ ಗೊತ್ತಿಲ್ಲ ಆದರೆ ಪ್ರತಿವಾದಿಯರ ಮನೆಯು ಜನತಾ ಸೈಟಿನಲ್ಲಿದೆ. 2000 ನೇ ಸಾಲಿನಲ್ಲಿ ಬೀಚನಹಳ್ಳಿ ಕೊಪ್ಪಲು ಗ್ರಾಮದ ಒಂದು ಎಕರೆ ಜಮೀನಿಗೆ 20,000/- ರೂಪಾಯಿಯಷ್ಟು ಮೌಲ್ಯವಿತ್ತು ಎಂದರೆ ಸಾಕ್ಷಿಯು ನನಗೆ ಗೊತ್ತಿಲ್ಲ ಎಂದು ನುಡಿದಿರುತ್ತಾರೆ. ನಾನು ಪ್ರತಿವಾದಿಯರ ಸಂಬಂಧಿಕನಾಗಿರುವುದರಿಂದ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

3. ದಿನಾಂಕ 08.05.2000 ರಂದು ನಡೆದ ವ್ಯವಹಾರದಲ್ಲಿ ನಾನು ಹಾಜರಿರಲಿಲ್ಲ. ಹಣದ ವ್ಯವಹಾರದ ಸಂಬಂಧ ವಾದಿಯರು ಈ ದಾವೆಯನ್ನು ಹೂಡಿರುತ್ತಾರೆ. ನನಗೆ ಈ ದಾವೆಯ ಬಗ್ಗೆ ಯಾವುದೇ ಮಾಹಿತಿ ಇಲ್ಲದಿದ್ದರು ಸಹ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

**ಓ. ಹೇ. ಕೇ. ಸರಿ ಇದೆ.**

**1 ನೇ ಹೆಚ್ಚುವರಿ ಸಿವಿಲ್ ಮತ್ತು ಜೆಎಂಎಫ್‌ಸಿ**
**ನ್ಯಾಯಾಧೀಶರು, ಕೆ.ಆರ್.ನಗರ.**